# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 821(964) |
| ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.12.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ (ಕೆಐಎಡಿಬಿಯು) ಮಂಡ್ಯ ಜಿಲ್ಲೆಯಲ್ಲಿ ಕೈಗಾರಿಕಾ ಪ್ರದೇಶಾಭಿ ವೃದ್ಧಿಗಾಗಿ ಎಲ್ಲೆಲ್ಲಿ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಲಾಗಿದೆ; (ತಾಲ್ಲೂಕು, ಗ್ರಾಮಗಳ ಹೆಸರು, ವಿಸ್ತೀರ್ಣ ಸೇರಿದಂತೆ ಸಂಪೂರ್ಣ ವಿವರ ನೀಡುವುದು)</td><td>ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಡ್ಯ ಜಿಲ್ಲೆಯಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಕಲಂ 28(1)ರಡಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿರುವ ಜಮೀನುಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ ಸಂ</th><th>ಕಲಂ 28(1)ರ ಪ್ರಾಥಮಿಕ ಅಧಿಸೂಚನೆ ಸಂಖ್ಯೆ ಮತ್ತು ದಿನಾಂಕ</th><th>ಜಿಲ್ಲೆ/ ತಾಲ್ಲೂಕು</th><th>ಗ್ರಾಮ</th><th>ವಿಸ್ತೀರ್ಣ</th><th>ಷರಾ</th></tr>
<tr><td>1</td><td>2</td><td>3</td><td>4</td><td>5</td><td>6</td></tr>
<tr><td>1</td><td>ಸಿಐ 96 ಎಸ್‌ಪಿಕ್ಯೂ (ಇ) 2019 ದಿನಾಂಕ: 14-08-2020</td><td>ಮಂಡ್ಯ / ನಾಗಮಂಗಲ</td><td>ಚೆನ್ನಾಪುರ, ಬೀಚನ ಹಳ್ಳಿ, ಹಟ್ನ, ಬಿಳಗುಂದ</td><td>14-08<br>271-39<br>429-27<br>561-08½<br>1277-02 ½</td><td>ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕ ದಿಂದಲೂ ರೈತರು/ ಅಧಿಸೂಚಿತ ಖಾತೆದಾರರು ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡುವಂತೆ ಕೋರಿ ಮುಷ್ಕರ ನಡೆಸುತ್ತಿದ್ದು, ಜೆ.ಎಂ.ಸಿ. ಕಾರ್ಯ ಕೈಗೊಳ್ಳಲು ಹಾಗೂ ಅಂತಿಮ ಅಧಿಸೂಚನೆ ಹೊರಡಿಸಲು ಬಾಕಿ ಇರುತ್ತದೆ.</td></tr>
<tr><td>2</td><td>ಸಿಐ 100 ಎಸ್‌ಪಿಕ್ಯೂ (ಇ) 2019 ದಿನಾಂಕ: 12-01-2022</td><td>ಮಂಡ್ಯ / ಮದ್ದೂರು</td><td>ಕುದುರ ಗುಂಡಿ ಗೆಜ್ಜಲಗೆರೆ ಗೋರವನ ಹಳ್ಳಿ</td><td>0-06<br>2-25<br>2-06<br>4-37</td><td>ಸರ್ವೆ ದುರಸ್ತಿ ಕಾರ್ಯ ಪ್ರಗತಿಯಲ್ಲಿದ್ದು, ಪೂರ್ಣಗೊಂಡ ನಂತರ ಕಲಂ 28(4)ರ ಅಂತಿಮ ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗುತ್ತದೆ.</td></tr>
<tr><td>3</td><td>ಸಿಐ 16 ಎಸ್‌ಪಿಕ್ಯೂ (ಇ) 2022 ದಿನಾಂಕ: 28-01-2022</td><td>ಮಂಡ್ಯ / ಮಂಡ್ಯ</td><td>ನೊದೇ ಕೊಪ್ಪಲು</td><td>284-25½</td><td>ಕಲಂ 28(3)ರ ವಿಚಾರಣೆ ಸಮಯದಲ್ಲಿ ಅಧಿಸೂಚಿತ ಖಾತೆದಾರರುಗಳು ಒಟ್ಟಾಗಿ ಕಛೇರಿಗೆ ಆಗಮಿಸಿ</td></tr>
</table></td></tr>
</table>

| | | | | | | |
|---|---|---|---|---|---|---|
| | | | | | | ಭೂಸ್ವಾಧೀನ ಪ್ರಕ್ರಿಯೆ ವಿರುದ್ಧ ಪ್ರತಿಭಟನೆ ನಡೆಸಿ ವಿರೋಧ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಕಲಂ 28(3) ಆದೇಶ ಹೊರಡಿಸುವ, ಜಂಟಿ ಅಳತೆ ಕೆಲಸ ನಿರ್ವಹಿಸುವ ಮತ್ತು ಕಲಂ 28(4)ರ ಅಂತಿಮ ಅಧಿಸೂಚನೆ ಪ್ರಸ್ತಾವನೆ ಸಲ್ಲಿಸುವ ಕಾರ್ಯಗಳು ಬಾಕಿ ಇರುತ್ತದೆ. |
| | **4** | - | ಮಂಡ್ಯ/ ಮಳವಳ್ಳಿ | ಬಾಚನ ಹಳ್ಳಿ<br>ಪಂಡಿತ ಹಳ್ಳಿ<br>ಮಂಚನ ಹಳ್ಳಿ<br>ಮಂಚನ ಪುರ | 828-32<br>115-04<br>162-07<br>143-19<br>**1249-22** | ದಿನಾಂಕ:27-03-2023 ರಂದು ನಡೆದ ಮಂಡಳಿಯ 384ನೇ ಸಭೆಯಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಸ್ವಾಧೀನಪಡಿಸಿಕೊಳ್ಳಲು ಅನುಮೋದನೆಯಾಗಿರುತ್ತದೆ. ಪಂಡಿತಹಳ್ಳಿ ಪ್ರದೇಶವು ಉದ್ದೇಶಿತ ಪೂರಿಗಾಲಿ, ಹನಿ ನೀರಾವರಿ ಯೋಜನೆ ವ್ಯಾಪ್ತಿಗೆ ಒಳಪಡುವುದಾಗಿ ತಿಳಿದುಬಂದಿರುವುದರಿಂದ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಿರುತ್ತದೆ. |

| | | |
|---|---|---|
| ಆ) | ಪ್ರಸ್ತಾವಿತ ಭೂಸ್ವಾಧೀನ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗಿದೆಯೇ; | ಪ್ರಸ್ತಾವಿತ ಭೂಸ್ವಾಧೀನ ಪ್ರಕ್ರಿಯೆಗಳನ್ನು ನಿಯಮಾನುಸಾರ ಪೂರ್ಣಗೊಳಿಸಿದ ನಂತರ ಅಭಿವೃದ್ಧಿಪಡಿಸಲಾಗುತ್ತದೆ. |
| ಇ) | ಇಲ್ಲದಿದ್ದಲ್ಲಿ, ಕಾರಣಗಳೇನು; ಅಳತೆ ಕಾರ್ಯ ಪೂರ್ಣಗೊಂಡಿರುವ, ಪರಿಹಾರ ಪಾವತಿಸಿರುವ ಅಥವಾ ಪಾವತಿಸಲು ಬಾಕಿ ಇರುವ ಮೊತ್ತ ಹಾಗೂ ಸರ್ಕಾರದ ಹಂತದಲ್ಲಿ ಅನುಮೋದನೆಗೆ ಬಾಕಿ ಪ್ರದೇಶಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಮಾಹಿತಿಯನ್ನು ಕ್ರಮ ಸಂಖ್ಯೆ "ಅ" ರಲ್ಲಿ ಒದಗಿಸಿದೆ. |

| | | |
|---|---|---|
| ಈ) | ಸದರಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿಯಿಂದಾಗಿ ಭೂಮಿಯನ್ನು ಕಳೆದುಕೊಳ್ಳುವ ರೈತರಿಗೆ ನೀಡುವ ಪರಿಹಾರವೇನು; | ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಮಂಡಳಿಯು ನಿಯಮಾನುಸಾರ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯ ಅನುಮೋದನೆಯಂತೆ ಭೂಪರಿಹಾರ ನಿಗಧಿಪಡಿಸಿ ರೈತರಿಗೆ ಪರಿಹಾರ ಪಾವತಿಸಲಾಗುತ್ತದೆ. |
| ಉ) | ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಿದ ನಂತರ ಸ್ಥಾಪನೆಗೊಳ್ಳುವ ಕೈಗಾರಿಕಾ ಘಟಕಗಳಿಂದ ಎಷ್ಟು ಜನರಿಗೆ ಉದ್ಯೋಗ ಸೃಷ್ಟಿಯಾಗುವ ಸಾಧ್ಯತೆ ಇದೆ? (ವಿವರ ನೀಡುವುದು) | ಮಂಡಳಿಯು ಹಂಚಿಕೆದಾರರೊಂದಿಗೆ ನೆರವೇರಿಸುತ್ತಿರುವ ಗುತ್ತಿಗೆ ಕರಾರು ಪತ್ರದಲ್ಲಿ ಸರ್ಕಾರದ ಕೈಗಾರಿಕಾ ನೀತಿ ಅನುಸಾರ ಉದ್ಯೋಗಾವಕಾಶ ಕಲ್ಪಿಸಬೇಕೆಂಬ ಷರತ್ತನ್ನು ವಿಧಿಸಲಾಗಿದೆ. ಅಲ್ಲದೇ, ಜಮೀನು ಕಳೆದುಕೊಂಡ ಕುಟುಂಬದ ಕನಿಷ್ಟ ಒಬ್ಬ ಸದಸ್ಯನಿಗೆ ಉದ್ಯೋಗಾವಕಾಶ ಕಲ್ಪಿಸಲು ಷರತ್ತು ವಿಧಿಸಲಾಗುತ್ತಿದೆ. |

**ಸಂಖ್ಯೆ:ಸಿಐ 546 ಐಎಪಿ 2024**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು